ದಿನಾಂಕಃ**05-02-2026** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಮಾಡಿಸಲಾಯಿತು.

ಮಧ್ಯಂತರ ಅರ್ಜಿ-**1** ಕಾಲ ವಿಳಂಬ ಮನ್ನಾ ಅರ್ಜಿಯ ಮೇಲೆ ಅರ್ಜಿದಾರರ ಮುಖ್ಯ ವಿಚಾರಣೆ.

ಮುಖ್ಯವಿಚಾರಣೆಃ ಅರ್ಜಿದಾರರ ಪರ ಶ್ರೀ ಕೆ ಎಸ್ ಎಸ್ ವಕೀಲರಿಂದಃ

ನಾನು ಈ ಕೇಸಿನಲ್ಲಿ ಅರ್ಜಿದಾರಳಾಗಿದ್ದು, ನನ್ನ ಸಾಕ್ಷ್ಯದ ಮುಖ್ಯವಿಚಾರಣೆಯಾಗಿ ಪ್ರಮಾಣಪತ್ರವನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಪ್ರಮಾಣಪತ್ರದಲ್ಲಿ ಬರೆದಿರುವ ವಿಷಯಗಳು ನನಗೆ ತಿಳಿದಿದೆ ಮತ್ತು ಸತ್ಯವಾಗಿದೆ.

ಆದುದರಿಂದ ಕಾಲ ವಿಳಂಬ ಅರ್ಜಿಯನ್ನು ಮನ್ನಾ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

ಪಾಟೀ ಸವಾಲುಃ **1** ನೇ ಎದುರುದಾರರ ಪರ ಶ್ರೀ ಬಿ ಕೆ ವಿ ವಕೀಲರಿಂದಃ

ನಾನು ಅಪಘಾತ ಆದ 7 ದಿನಗಳ ಕಾಲ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆದಿರುತ್ತೇನೆ. ನಾನು ಅಕ್ಟೋಬರ್ 1, 2024 ರಂದು ಪುನಃ ಕೆಲಸಕ್ಕೆ ಸೇರಿಕೊಂಡಿರುತ್ತೇನೆ. ಈ ಮಧ್ಯೇ ನಾನ ಕೆಲಸಕ್ಕೆ ಓಡಾಡಲು ಆಗುವುದಿಲ್ಲ ಎಂಬುದರ ಬಗ್ಗೆ ವೈಧ್ಯಕೀಯ ದಾಖಲೆಯನ್ನು ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಪುನಃ ಕೆಲಸಕ್ಕೆ ಹೋದ ಬಗ್ಗೆ ಯಾವುದೇ ದಾಖಲೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಪುನಃ ಕೆಲಸಕ್ಕೆ ಹೋದ ಬಗ್ಗೆ ಮತ್ತು ದಾಖಲೆಯನ್ನು ಹಾಜರುಪಡಿಸಿದ ಬಗ್ಗೆ ನನ್ನ ಅರ್ಜಿಯಲ್ಲಿ ಹಾಗೂ ಮುಖ್ಯ ವಿಚಾರಣೆಯಲ್ಲಿ ಹೇಳಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಪರಿಹಾರ ಕೋರಿ ಸಕಾಲಕದಲ್ಲಿ ಅರ್ಜಿ ಸಲ್ಲಿಸಲು ಯಾವುದೇ ತೊಂದರೆ ಇರಲಿಲ್ಲ ಎಂದರೆ ಸರಿಯಲ್ಲ. ನಾನು ಕಾಲ ವಿಳಂಬ ಮನ್ನಾ ಮಾಡುವಂತೆ ಯಾವುದೇ ಸಕಾರಣಗಳನ್ನು ತಿಳಿಸಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಹೇಳುತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ 3 ನೇ ಎದುರುದಾರರ ಪರ ತಮ್ಮ ಆಕ್ಷೇಪಣೆಯನ್ನು ಸಲ್ಲಿಸದ ಕಾರಣ ಅವರ ಪರ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ ಃಇಲ್ಲಃ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸ ಇ ಎ ಒ
Sd/-xxx
ಹಿರಿಯ ಸಿವಿಲ್ ನ್ಯಾಯಾಧೀಶರುಃ ನ.ರಾ.ಪುರ,
ಸಂಚಾರಿ ನ್ಯಾಯಾಲಯ, ಕೊಪ್ಪ.

ಸಾಕ್ಷಿದಾರರ ಸಹಿಃ